# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/29 /2011-12

ದಿನಾಂಕ: 16-08-2011

## ಸಭಾಹ್ವಾನ ಪತ್ರ

ದಿನಾಂಕ: **26-08-2011**ರಂದು ಶುಕ್ರವಾರ ಅಪರಾಹ್ನ:**12-05** ಗಂಟೆಗೆ ಶ್ರೀ ಬಿ.ಡಿ.ಚಂದ್ರೇಗೌಡ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

(ಎಸ್.ಟಿ.ಅಂಜನ್ ಕುಮಾರ್),
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ದಿನಾಂಕ: 01-08-2011ರಂದು ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ.
2. ಹಾಸನ ನಗರಸಭೆ ಹಾಗೂ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ಮಾಡುವ ಮೊದಲು ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಹಾಗೂ ಈ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳು ಕೂಡಾ ನಿವೇಶನಗಳನ್ನು ಮಾಡುವಾಗ ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ನಿರ್ವಹಣೆ ಮಾಡುವ ಬಗ್ಗೆ
3. ಸತ್ಯಮಂಗಲ, ಭೂವನಹಳ್ಳಿ ಮತ್ತು ಹರಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸುವ ಬಗ್ಗೆ ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವ ಬಗ್ಗೆ.
4. ಸತ್ಯಮಂಗಲ ಗ್ರಾಮ ಪಂಚಾಯಿತಿ ಕೆರೆ ಹಾಗೂ ಗವೇನಹಳ್ಳಿಯ ಕೆರೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ.

5. 2010-11ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸರ್ಕಾರದ ಅನುಮೋದನೆ ನಿರೀಕ್ಷಣೆಯೊಂದಿಗೆ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯದನ್ವಯ ತಾಲ್ಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿದ್ದ ಸ್ಥಾನಗಳಲ್ಲಿ ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಹಾಸನ ಪಟ್ಟಣದಲ್ಲಿ ಮೆಟ್ರಿಕ್ ನಂತರದ 100 ಬಾಲಕರ ಮತ್ತು 100 ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ
6. 2011-12ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಮೆಟ್ರಿಕ್ ನಂತರದ ಬಾಲಕರ /ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ.
7. ಹಾಸನ ನಗರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ವಸತಿ ಗೃಹ ನಿರ್ಮಾಣಕ್ಕೆ ವಿಶೇಷ ಅನುದಾನ ನೀಡುವ ಬಗ್ಗೆ.
8. ಜಿಲ್ಲಾ ಪಂಚಾಯಿತಿಯ ಹಿರಿಯ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣಕ್ಕೆ ನಿವೇಶನ ನೀಡುವ ಬಗ್ಗೆ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ.
9. ಜಿಲ್ಲೆಯ ರೈತರ ಜಮೀನಿನಲ್ಲಿರುವ ಐ.ಪಿ ಸೆಟ್ ಮತ್ತು ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯ ಟ್ರಾನ್ಸ್ ಫಾರಂಗಳನ್ನು ಸರಬರಾಜು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ.
10. ಹಾಸನ ಜಿಲ್ಲೆಗೆ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಐ.ಟಿ.ಐ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಕಾರ್ಮಿಕ ಇಲಾಖೆಗೆ ಪಸ್ತಾವನೆ ಸಲ್ಲಿಸುವ ಕುರಿತು.
11. ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪ್ರಥಮ ದರ್ಜೆ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ.
12. ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪದವಿ ಪೂರ್ವ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ.
13. ಹಾಸನ ಜಿಲ್ಲೆಯಲ್ಲಿ ಅಂಗಮಾರಿ ರೋಗದಿಂದ ನಾಶವಾಗಿರುವ ಆಲೂಗೆಡ್ಡೆ ಬೆಳೆಗೆ ಸೂಕ್ತ ಪರಿಹಾರವನ್ನು ನೀಡುವ ಬಗ್ಗೆ ಮತ್ತು ಹಾಸನ ತಾಲ್ಲೂಕು ಸೋಮನಹಳ್ಳಿಯಲ್ಲಿ ಆಲೂಗೆಡ್ಡೆ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

<u>ಪ್ರತಿಯನ್ನು:</u>

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.

# ದಿನಾಂಕ: 26-08-2011ರಂದು ಅಪರಾಹ್ನ:12-05 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು

**ಅಧ್ಯಕ್ಷತೆ: ಶ್ರೀ ಬಿ.ಡಿ.ಚಂದ್ರೇಗೌಡ,**

**ಆಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 46 ಗೈರು ಹಾಜರಿ:12

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ದಿನಾಂಕ: 01-08-2011 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿನಾಂಕ: 01-08-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಸಭೆಯಲ್ಲಿ ಮಂಡಿಸಿದರು ಹಾಗೂ ಸದಸ್ಯರು ಸದರಿ ನಡವಳಿಗಳನ್ನು ಅಂಗೀಕರಿಸಲು ಕೋರಿದರು. | ಸುದೀರ್ಘ ಚರ್ಚೆಯ ನಂತರ ದಿನಾಂಕ: 01-08-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಪರಿಶೀಲಿಸಿ, ಚರ್ಚಿಸಿ, ಅಂಗೀಕರಿಸಿ ದಾಖಲು ಮಾಡಲು ಸರ್ವಾನು ಮತದಿಂದ ನಿರ್ಣಯಿಸಿತು. |
| 2 | ಹಾಸನ ನಗರಸಭೆ ಹಾಗೂ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ಮಾಡುವ ಮೊದಲು ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು | ಹಾಸನ ನಗರಸಭೆ ಹಾಗೂ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ಮಾಡುವ ಮೊದಲು ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಪಡೆಯುವ ಬಗ್ಗೆ ಹಾಗೂ ಈ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳು ಕೂಡಾ ನಿವೇಶನಗಳನ್ನು ಮಾಡುವಾಗ ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ನಿರ್ವಹಣೆ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ನಿರ್ಣಯಕ್ಕಾಗಿ ಸಭೆಗೆ ವಿಷಯವನ್ನು ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ನಗರಸಭೆ ಹಾಗೂ ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ಮಾಡುವ ಮೊದಲು ಟೌನ್ |

| | | | |
|---|---|---|---|
| | ಪಡೆಯುವ ಬಗ್ಗೆ ಹಾಗೂ ಈ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳು ಕೂಡಾ ನಿವೇಶನಗಳನ್ನು ಮಾಡುವಾಗ ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ನಿರ್ವಹಣೆ ಮಾಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಡಾವಣೆ ಮಾಡಲು ಗ್ರಾಮಪಂಚಾಯಿತಿಗಳಿಂದ ಅನುಮತಿ ಪಡೆಯಲಾಗುತ್ತಿದೆ. ಆದರೆ, ಜಿಲ್ಲೆಯ ನಗರಸಭೆ ಮತ್ತು ಜಿಲ್ಲೆಯ ಎಲ್ಲಾ ಪುರಸಭೆಗಳಿಂದ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ನಿರ್ಮಾಣ ಮಾಡಲು ನಗರ ಯೋಜನಾ ನಿರ್ದೇಶಕರ ಅನುಮತಿಯನ್ನು ಪಡೆದಲ್ಲಿ ಪಟ್ಟಣ ಪ್ರದೇಶಗಳ ಹತ್ತಿರದಲ್ಲಿರುವ ಗ್ರಾಮ ಪಂಚಾಯಿತಿಗಳ ಅಧಿಕಾರವನ್ನು ಕಡಿತಗೊಳಿಸಿದಂತಾಗುತ್ತದೆ. ಅಲ್ಲದೆ, ನಗರಸಭೆ,ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಪ್ರಸ್ತಾವನೆಗಳಿಗೆ ಅನುಮತಿಯನ್ನು ನೀಡುವುದು ವಿಳಂಬವಾಗುತ್ತದೆ ಎಂದು ಅಭಿಪ್ರಾಯಪಟ್ಟರು.<br>ಇದಕ್ಕೆ ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರೂ ಸಹ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರು ಮಾತನಾಡುತ್ತಾ, ಜಿಲ್ಲೆಯ ನಗರಸಭೆ ಮತ್ತು ಜಿಲ್ಲೆಯ ಎಲ್ಲಾ ಪುರಸಭೆಗಳಿಂದ 5 ಕಿ.ಮೀ ವ್ಯಾಪ್ತಿಯಲ್ಲಿ ಬಡಾವಣೆಗಳನ್ನು ನಿರ್ಮಾಣ ಮಾಡಲು ನಗರ ಯೋಜನಾ ನಿರ್ದೇಶಕರ ಅನುಮತಿಯನ್ನು ಪಡೆಯಬೇಕಾದಲ್ಲಿ ಗ್ರಾಮೀಣ ಪ್ರದೇಶದಲ್ಲಿರುವ ಬಡಜನರು ಇಂದಿರಾ ಆವಾಜ್, ಆಶ್ರಯ ಮುಂತಾದ ಯೋಜನೆಗಳಡಿಯಲ್ಲಿ ಸ್ವಂತ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳಲು ತುಂಬಾ ತೊಂದರೆಯಾಗುತ್ತದೆ. ಆದ್ದರಿಂದ, ಈ ಬಗ್ಗೆಯೂ ಸಹ ಪರಿಶೀಲಿಸಿ , ಸೂಕ್ತ ವ್ಯವಸ್ಥೆ ಮಾಡಿ ನಂತರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ನಿವೇಶನಗಳನ್ನು ಅಲಿನೇಷನ್ ಮಾಡುವ ಶುಲ್ಕವನ್ನು ಈಗಿರುವ ದರಕ್ಕಿಂತ 5 ಪಟ್ಟು ಹೆಚ್ಚು ಮಾಡಲಾಗಿದೆ. ಆಸ್ತಿ ದರವನ್ನೂ ಸಹ ಹೆಚ್ಚು ಮಾಡಲಾಗಿದೆ. ಈ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮುಂದೆ ಗ್ರಾಮ ಪಂಚಾಯಿತಿಗಳು ನಗರಸಭೆ/ಪುರಸಭೆ ವ್ಯಾಪ್ತಿಗೆ ಒಳಪಟ್ಟಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಸಗಿಯಾಗಿ ನಿರ್ಮಾಣ ಮಾಡಿ ಮಾರಾಟ ಮಾಡುವ ಬಡಾವಣೆಗಳಿಗೆ ಅವಶ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುಕೂಲವಾಗುವಂತೆ ನಗರಸಭೆ ಮತ್ತು ಪುರಸಭೆಗಳ ಅನುಮತಿಯನ್ನು ಪಡೆಯುವುದು ಸೂಕ್ತವಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯ ಅನುಮತಿ ಅಗತ್ಯವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಪಟೇಲ್ ಶಿವರಾಂ ರವರು ಮಾತನಾಡುತ್ತಾ, ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಯವರ ಮೂಲಕ ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸಬೇಕೆಂದು ಕೋರಿದರು. | ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಪಡೆಯುವ ಬಗ್ಗೆ ಹಾಗೂ ಈ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳು ಕೂಡಾ ನಿವೇಶನಗಳನ್ನು ಮಾಡುವಾಗ ಟೌನ್ ಪ್ಲಾನಿಂಗ್ ನಿರ್ದೇಶಕರ ಅನುಮತಿಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ನಿರ್ವಹಣೆ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |

| | | | |
|---|---|---|---|
| | ಸತ್ಯಮಂಗಲ, ಭೂವನಹಳ್ಳಿ ಮತ್ತು ಹರಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸುವ ಬಗ್ಗೆ ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವ ಬಗ್ಗೆ. | ಸತ್ಯಮಂಗಲ, ಭೂವನಹಳ್ಳಿ ಮತ್ತು ಹರಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸುವ ಬಗ್ಗೆ ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಮಂಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ಸತ್ಯಮಂಗಲ, ಭೂವನಹಳ್ಳಿ ಮತ್ತು ಹರಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆಗಳನ್ನು ಮಾಡುವ ವಿಷಯವು ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಬರುತ್ತದೆಯೇ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿಯೂ ಸಹ ರಸ್ತೆಗಳು ಹದಗೆಟ್ಟಿರುತ್ತವೆ. ಅವುಗಳಲ್ಲಿಯೂ ಸಹ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಾಣ ಮಾಡುವುದು ಅಗತ್ಯವಾಗಿರುತ್ತದೆ. ಆದ್ದರಿಂದ, ಜಿಲ್ಲಾ ಪಂಚಾಯಿತಿ ಸದಸ್ಯರು ನೀಡುವ ರಸ್ತೆಗಳ ಪಟ್ಟಿಯನ್ನು ಸಹ ಪರಿಗಣಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಪಿ.ಎಂ.ಜಿ.ಎಸ್.ವೈ ಯೋಜನೆಯುಡಿಯಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಿಸಲು ಕೋರ್ ನೆಟ್ ಮ್ಯಾಪಿನಲ್ಲಿ ಬರುತ್ತವೆಯೇ ಎಂಬ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ ಜಿಲ್ಲಾ ಪಂಚಾಯಿತಿಯಿಂದ ಯಾವುದೇ ಅನುದಾನವನ್ನು ನೀಡಲಾಗುತ್ತಿಲ್ಲ. ಕೇವಲ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. ಆದ್ದರಿಂದ, ಪ್ರಸ್ತಾವನೆಗೆ ಜಿಲ್ಲಾ ಪಂಚಾಯಿತಿಯಲ್ಲಿ ಅನುಮೋದನೆ ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುವ ಬಗ್ಗೆ ಜಿಲ್ಲಾಪಂಚಾಯಿತಿ ಸದಸ್ಯರು ನೀಡುವ ಪಟ್ಟಿಯನ್ನು ಪರಿಗಣಿಸಿ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ತಾ; ಸತ್ಯಮಂಗಲ, ಬೂವನಹಳ್ಳಿ ಮತ್ತು ಹರಳಹಳ್ಳಿ ಗ್ರಾಮ ಪಂಚಾಯಿತಿಗಳನ್ನು ಒಳಗೊಂಡಂತೆ ಪಿ.ಎಂ.ಜಿ. ಎಸ್.ವೈ ಯೋಜನೆಯಡಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸ ಲಾಯಿತು. |
| 4 | ಸತ್ಯಮಂಗಲ ಗ್ರಾಮ ಪಂಚಾಯಿತಿ ಕೆರೆ ಮತ್ತು ಗವೇನಹಳ್ಳಿಯ ಕೆರೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ. | ಹಾಸನ ತಾ: ಸತ್ಯಮಂಗಲ ಗ್ರಾಮ ಪಂಚಾಯಿತಿ ಕೆರೆ ಮತ್ತು ಗವೇನಹಳ್ಳಿಯ ಕೆರೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಕುರಿತು ವಿಷಯವನ್ನು ಸಭೆಯ ಅನುಮೋದನೆಗೆ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ತಾ: ಸತ್ಯಮಂಗಲ ಗ್ರಾಮ ಪಂಚಾಯಿತಿ ಕೆರೆ ಮತ್ತು |

| | | | |
|---|---|---|---|
| | | | ಗವೇನಹಳ್ಳಿಯ ಕೆರೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| 5 | 2010-11ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸರ್ಕಾರದ ಅನುಮೋದನೆ ನಿರೀಕ್ಷಣೆಯೊಂದಿಗೆ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯದನ್ವಯ ತಾಲ್ಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿದ್ದ ಸ್ಥಾನಗಳಲ್ಲಿ ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಹಾಸನ ಪಟ್ಟಣದಲ್ಲಿ ಮೆಟ್ರಿಕ್ ನಂತರದ 75 ಬಾಲಕರ ಮತ್ತು 125 ಬಾಲಕಿಯರ ಸಂಖ್ಯಾಬಲದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | 2010-11ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸರ್ಕಾರದ ಅನುಮೋದನೆ ನಿರೀಕ್ಷಣೆಯೊಂದಿಗೆ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯದನ್ವಯ ತಾಲ್ಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿದ್ದ ಸ್ಥಾನಗಳಲ್ಲಿ ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಹಾಸನ ಪಟ್ಟಣದಲ್ಲಿ ಮೆಟ್ರಿಕ್ ನಂತರದ 75 ಬಾಲಕರ ಮತ್ತು 125 ಬಾಲಕಿಯರ ಸಂಖ್ಯಾಬಲದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಮಾನ್ಯ ಅಧ್ಯಕ್ಷರು ವಿಷಯವನ್ನು ಸಭೆಗೆ ಮಂಡಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, 2010-11ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸರ್ಕಾರದ ಅನುಮೋದನೆ ನಿರೀಕ್ಷಣೆಯೊಂದಿಗೆ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯದನ್ವಯ ತಾಲ್ಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿದಿದ್ದ ಸ್ಥಾನಗಳಲ್ಲಿ ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಹಾಸನ ಪಟ್ಟಣದಲ್ಲಿ ಮೆಟ್ರಿಕ್ ನಂತರದ 75 ಬಾಲಕರ ಮತ್ತು 125 ಬಾಲಕಿಯರ ಸಂಖ್ಯಾಬಲದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | 2011-12ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಮೆಟ್ರಿಕ್ ನಂತರದ ಬಾಲಕರ/ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | 2011-12ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಮೆಟ್ರಿಕ್ ನಂತರದ ಬಾಲಕರ/ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, 2011-12ನೇ ಸಾಲಿಗೆ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಮೆಟ್ರಿಕ್ ನಂತರದ ಬಾಲಕರ/ ಬಾಲಕಿಯರ ವಿದ್ಯಾರ್ಥಿ ನಿಲಯ ಗಳನ್ನು ಪ್ರಾರಂಭಿಸಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| 7 | ಹಾಸನ ನಗರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ವಸತಿ ಗೃಹ ನಿರ್ಮಾಣಕ್ಕೆ ವಿಶೇಷ ಅನುದಾನ ನೀಡುವ ಬಗ್ಗೆ. | ಹಾಸನ ನಗರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ವಸತಿ ಗೃಹ ನಿರ್ಮಾಣಕ್ಕೆ ವಿಶೇಷ ಅನುದಾನ ನೀಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ನಗರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ವಸತಿ ಗೃಹ ನಿರ್ಮಾಣಕ್ಕೆ ವಿಶೇಷ ಅನುದಾನ ನೀಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | ಜಿಲ್ಲಾ ಪಂಚಾಯಿತಿಯ ಹಿರಿಯ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣಕ್ಕೆ ನಿವೇಶನ ನೀಡುವ ಬಗ್ಗೆ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | ಜಿಲ್ಲಾ ಪಂಚಾಯಿತಿ ಹಿರಿಯ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣಕ್ಕೆ ಅಗತ್ಯ ನಿವೇಶನವನ್ನು ನೀಡುವಂತೆ ಕೋರಿ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ ಜಿಲ್ಲಾ ಪಂಚಾಯಿತಿಯ ಹಿರಿಯ ಅಧಿಕಾರಿಗಳ ವಸತಿ ಸಮುಚ್ಚಯ ನಿರ್ಮಾಣಕ್ಕೆ ನಿವೇಶನ ನೀಡುವ ಬಗ್ಗೆ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಮದ ತೀರ್ಮಾನಿಸಲಾಯಿತು. |
| 9 | ಜಿಲ್ಲೆಯ ರೈತರ ಜಮೀನಿನಲ್ಲಿರುವ ಐ.ಪಿ ಸೆಟ್ ಮತ್ತು ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯ ಟ್ರಾನ್ಸ್ ಫಾರಂಗಳನ್ನು ಸರಬರಾಜು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | ಜಿಲ್ಲೆಯ ರೈತರ ಜಮೀನಿನಲ್ಲಿರುವ ಐ.ಪಿ ಸೆಟ್ ಮತ್ತು ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯ ಟ್ರಾನ್ಸ್ ಫಾರಂಗಳನ್ನು ಸರಬರಾಜು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಸಭೆಯಲ್ಲಿ ವಿಷಯವನ್ನು ಮಂಡಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಟ್ರಾನ್ಸ್ ಫಾರ್ಮರ್ ಗಳ ಬಗ್ಗೆ ಕೇಳಿದಾಗಲೆಲ್ಲ ಚೆಸ್ಕಾಂ ಅಧಿಕಾರಿಗಳು ಸಾಮಗ್ರಿಗಳು ಸರಬರಾಜಾಗಿಲ್ಲವೆಂದು ಹೇಳುತ್ತಾರೆ. ಹಾಸನ ಜಿಲ್ಲೆಗೆ ಎಷ್ಟು ಕೆ.ವಿ ಟಿ.ಸಿ ಸರಬರಾಜಾಗಿವೆ ಮತ್ತು ಇತರೆ ಸಾಮಗ್ರಿಗಳ ಬಗ್ಗೆ ಮಾಹಿತಿಯನ್ನು ನೀಡಬೇಕೆಂದು ಕೋರಿದರು. ಆಲೂರು ತಾಲ್ಲೂಕು ಸಿದ್ದಾಪುರ ಗ್ರಾಮದಲ್ಲಿ ವಿದ್ಯುತ್ ಲೈನ್ ತುಂಬಾ ಕೆಳಗೆ ಇರುತ್ತದೆ. ಈ ಬಗ್ಗೆ ಅನೇಕ ಬಾರಿ ಚೆಸ್ಕಾಂ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರಲಾಗಿದ್ದರೂ ಸಹ ಇಲ್ಲಿಯವರೆಗೆ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟವರು ಕೂಡಲೇ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಎನ್.ರಾಮಚಂದ್ರರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕಿನಲ್ಲಿ ಚೆಸ್ಕಾಂ ಇಲಾಖೆಯಡಿ ಇಂಜಿನಿಯರ್ ಮತ್ತು ಲೈನ್ ಮೆನ್ ಇರುವುದಿಲ್ಲ. ಆದ್ದರಿಂದ, ಒಬ್ಬ ಅಭಿಯಂತರವರನ್ನಾದರೂ ನೇಮಕ ಮಾಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲೆಯ ರೈತರ ಜಮೀನಿನಲ್ಲಿರುವ ಐ.ಪಿ ಸೆಟ್ ಮತ್ತು ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯ ಟ್ರಾನ್ಸ್ ಫಾರಂಗಳನ್ನು ಸರಬರಾಜು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 10 | ಹಾಸನ ಜಿಲ್ಲೆಗೆ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಐ.ಟಿ.ಐ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಬಗ್ಗೆ ಕಾರ್ಮಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | ಹಾಸನ ಜಿಲ್ಲೆಗೆ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಐ.ಟಿ.ಐ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಬಗ್ಗೆ ಕಾರ್ಮಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಸಭೆಯಲ್ಲಿ ವಿಷಯವನ್ನು ಮಂಡಿಸಲಾಯಿತು. | ಹಾಸನ ಜಿಲ್ಲೆಗೆ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಐ.ಟಿ.ಐ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಬಗ್ಗೆ ಕಾರ್ಮಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು |

| | | | |
|---|---|---|---|
| | | | ಸಭೆಯಲ್ಲಿ ಸರ್ವಾನುಮತದಿಂದ, ನಿರ್ಣಯಿಸಲಾಯಿತು. |
| 11 | ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪ್ರಥಮ ದರ್ಜೆ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ | ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರುಗಳು ಇಲ್ಲದೆ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಬಹಳ ತೊಂದರೆಯಾಗಿರುವುದರಿಂದ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪ್ರಥಮ ದರ್ಜೆ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 12 | ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪದವಿಪೂರ್ವ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ. | ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪದವಿಪೂರ್ವ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ ಮತ್ತು ಕಟ್ಟಡಗಳು ಇಲ್ಲದಿರುವ ಪದವಿಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ಸಭೆಯ ನಿರ್ಣಯಕ್ಕೆ ವಿಷಯವನ್ನು ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ಜಿಲ್ಲೆಯಲ್ಲಿ ನಡೆಯುತ್ತಿರುವ ಪದವಿ ಪೂರ್ವ ಕಾಲೇಜುಗಳಿಗೆ ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ ಮತ್ತು ಕಟ್ಟಡಗಳು ಇಲ್ಲದಿರುವ ಪದವಿಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 13 | ಹಾಸನ ಜಿಲ್ಲೆಯಲ್ಲಿ ಅಂಗಮಾರಿ ರೋಗದಿಂದ ನಾಶವಾಗಿರುವ ಆಲೂಗೆಡ್ಡೆ ಬೆಳೆಗೆ ಸೂಕ್ತ ಪರಿಹಾರವನ್ನು ನೀಡುವ ಬಗ್ಗೆ ಮತ್ತು ಹಾಸನ ತಾಲ್ಲೂಕು ಸೋಮನಹಳ್ಳಿಯಲ್ಲಿ | ಹಾಸನ ಜಿಲ್ಲೆಯಲ್ಲಿ ಅಂಗಮಾರಿ ರೋಗದಿಂದ ನಾಶವಾಗಿರುವ ಆಲೂಗೆಡ್ಡೆ ಬೆಳೆಗೆ ಸೂಕ್ತ ಪರಿಹಾರವನ್ನು ನೀಡುವ ಬಗ್ಗೆ ಮತ್ತು ಹಾಸನ ತಾಲ್ಲೂಕು ಸೋಮನಹಳ್ಳಿಯಲ್ಲಿ ಆಲೂಗೆಡ್ಡೆ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಶೇ.೯೦ರಷ್ಟು ಆಲೂಗೆಡ್ಡೆ ಬೆಳೆ ನಾಶವಾಗಿದೆ. ಅಲ್ಲದೆ, ಅರಸೀಕೆರೆ ಮತ್ತು ಚನ್ನರಾಯಪಟ್ಟಣ ತಾಲ್ಲೂಕುಗಳಲ್ಲಿ ಮಳೆ ಕೊರತೆಯಿಂದ ಬಿತ್ತನೆಯನ್ನೇ | ಹಾಸನ ಜಿಲ್ಲೆಯಲ್ಲಿ ಅಂಗಮಾರಿ ರೋಗದಿಂದ ನಾಶವಾಗಿರುವ ಆಲೂಗೆಡ್ಡೆ ಬೆಳೆಗೆ ಸೂಕ್ತ ಪರಿಹಾರವನ್ನು ನೀಡುವ ಬಗ್ಗೆ ಮತ್ತು ಹಾಸನ ತಾಲ್ಲೂಕು ಸೋಮನಹಳ್ಳಿ |

| | | | |
|---|---|---|---|
| | ಆಲೂಗೆಡ್ಡೆ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ | ಮಾಡಿರುವುದಿಲ್ಲ. ಆದ್ದರಿಂದ, ಸೂಕ್ತ ಪರಿಹಾರವನ್ನು ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | ಯಲ್ಲಿ ಆಲೂಗೆಡ್ಡೆ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ರಾಜ್ಯ ಸರ್ಕಾರದ ಮುಖೇನ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಕೋರಲು ಸಭೆಯಲ್ಲಿ ಸರ್ವಾನು ಮತದಿಂದ, ನಿರ್ಣಯಿಸಲಾಯಿತು. |
| | | ಮಾನ್ಯ ಅಧ್ಯಕ್ಷರು, ತಾಲ್ಲೂಕು ಪಂಚಾಯಿತಿ, ಅರಕಲಗೂಡು ಇವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದ ವತಿಯಿಂದ ಕಟ್ಟೇಪುರ, ಹಾರಂಗಿ ನಾಲಾ ಬದಿಗಳಲ್ಲಿ ಅರಣ್ಯೀಕರಣ ಮಾಡಲಾಗಿದೆ. ನಂತರ ಕಾಲುವೆಯಿಂದ ಹೂಳು ತೆಗೆದು ನಾಲಾ ಬದಿಗಳಲ್ಲಿ ನೆಟ್ಟಿರುವ ಸಸಿಗಳ ಮೇಲೆಯೇ ಹಾಕಲಾಗಿದ್ದು, ಒಂದೂ ಸಸಿಗಳು ಉಳಿದಿಲ್ಲ. ಆದ್ದರಿಂದ, ಅರಣ್ಯೀಕರಣ ಮಾಡಲು ಸೂಕ್ತ ಸ್ಥಳವನ್ನು ಆಯ್ಕೆ ಮಾಡುವುದು ಅಗತ್ಯವೆಂದು ಅಭಿಪ್ರಾಯಪಟ್ಟರು ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದರೂ ಸಹ ಅನುದಾನ ಬಿಡುಗಡೆಯಾಗಿರುವುದಿಲ್ಲ. ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ 2011-12ನೇ ಸಾಲಿನ ಕ್ರಿಯಾ ಯೋಜನೆಗೆ ದಿ: 01-08-2011ರಂದು ಅನುಮೋದನೆ ದೊರೆತಿದ್ದು, ಕಾಮಗಾರಿಗಳಿಗೆ ಅನುದಾನವನ್ನು ಬಿಡಗಡೆ ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿ ರೈತರಿಗೆ ಸಸಿಗಳನ್ನು ನೀಡುತ್ತಿದ್ದು, ಸಂಬಂಧಪಟ್ಟ ಇಲಾಖೆಯವರು ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದಿರುವುದಿಲ್ಲ. ಈ ಬಗ್ಗೆ ಮಾಹಿತಿ ನೀಡಬೇಕೆಂದು ಕೋರಿದರು ಮತ್ತು ಆಲೂರು ತಾಲ್ಲೂಕಿನಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿರುತ್ತದೆ. ಟಿ.ಸಿ. ಕೆಟ್ಟುಹೋದಲ್ಲಿ ಚೆಸ್ಕಾಂ ಇಲಾಖೆಯ ವತಿಯಿಂದ ತಿಂಗಳಾದರೂ ಸಹ ರಿಪೇರಿ ಮಾಡಿಕೊಡುವುದಿಲ್ಲ. ಇದರಿಂದ, ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುತ್ತದೆ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಯವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿ ಸುಜಲ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಅರಣ್ಯೀಕರಣ ಯೋಜನೆಯಡಿಯಲ್ಲಿ ಸಸಿಗಳನ್ನು ವಿತರಿಸಲಾಗಿದೆ ಮತ್ತು ಸಂಘಗಳ ಮೂಲಕ ನೇರವಾಗಿ ರೈತರಿಗೆ ಚೆಕ್ ವಿತರಣೆ ಮಾಡಲಾಗಿದೆ. ಹೊಸದಾಗಿ ಐ.ಡಬ್ಲ್ಯೂ.ಡಿಪಿ ಯೋಜನೆಯನ್ನು ಪ್ರಾರಂಭಿಸಲಾಗಿದ್ದು, ಆಲೂರು ತಾಲ್ಲೂಕಿನ 41 ಗ್ರಾಮಗಳು ಈ ಯೋಜನೆಗೆ | |

| | | | |
|---|---|---|---|
| | | ಒಳಪಡುತ್ತವೆ. ಈ ಯೋಜನೆಯಡಿ ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಮತ್ತು ಸಮೀಕ್ಷೆಯನ್ನು ಸಹ ನಡೆಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಅಂಬಿಕಾ ರಾಮಣ್ಣ ರವರು ಮಾತನಾಡುತ್ತಾ, ಕೊಳವೆ ಬಾವಿಗಳು ವಿಫಲವಾಗಿವೆ. ಇದರಿಂದ, ಕುಡಿಯುವ ನೀರಿಗೆ ಬಹಳ ತೊಂದರೆಯಾಗಿದ್ದು, ಸಮಸ್ಯೆಯನ್ನು ಪರಿಹರಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಟಾಸ್ಕ್ ಫೋರ್ಸ್ ಅಡಿಯಲ್ಲಿ ಕುಡಿಯುವ ನೀರಿನ ಯೋಜನೆಗಳ ದುರಸ್ಥಿಪಡಿಸಲು ಕ್ರಮ ವಹಿಸಬೇಕಾಗಿರುತ್ತದೆ ಎಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಶಾಸಕರು ಅವರಿಗೆ ಬೇಕಾದ ಕುಡಿಯುವ ನೀರಿನ ಯೋಜನೆಗಳಿಗೆ ಟಾಸ್ಕ್ ಫೋರ್ಸ್ ಅಡಿಯಲ್ಲಿ ಅನುದಾನವನ್ನು ನೀಡುತ್ತಾರೆ. ಆದರೆ, ಕೊಳವೆ ಬಾವಿಗಳು ವಿಫಲವಾದಲ್ಲಿ ಹೊಸದಾಗಿ ಕೊರೆಯಲು ಅವಕಾಶವಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕೊಳವೆ ಬಾವಿಗಳನ್ನು ಕೊನೆಯ ಆದ್ಯತೆ ಮೇಲೆ ಅನುಷ್ಠಾನ ಮಾಡಲು ಸರ್ಕಾರದ ಆದೇಶವಿರುತ್ತದೆ. ಆದ್ದರಿಂದ, ಹಾಲಿ ಇರುವ ಕುಡಿಯುವ ನೀರಿನ ಯೋಜನೆಗಳನ್ನು ರಿಪೇರಿ ಮಾಡಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಕ್ರಮ ವಹಿಸಬೇಕಾಗಿರುತ್ತದೆ ಎಂದು ವಿವರಿಸಿದರು. | |
| 14 | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| 1 | ಅರಕಲಗೂಡು ಪಟ್ಟಣದಲ್ಲಿರುವ ಸಂಸ್ಕೃತ ಭವನದ ಕಟ್ಟಡವನ್ನು ನಿರ್ಮಾಣ ಮಾಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅರಕಲಗೂಡು ಪಟ್ಟಣದಲ್ಲಿ ಸಂಸ್ಕೃತ ಭವನ ಕಟ್ಟಡವನ್ನು ರಾಜ್ಯ ಸಭಾ ಸದಸ್ಯರ ಸ್ಥಳೀಯ ಅನುದಾನದಲ್ಲಿ ನಿರ್ಮಾಣ ಮಾಡಲಾಗಿದೆ. ಇದು ಜಿಲ್ಲಾ ಪಂಚಾಯಿತಿಗೆ ಸೇರಿದ ಆಸ್ತಿಯಾಗಿರುತ್ತದೆ. ಆದ್ದರಿಂದ, ಸದರಿ ಕಟ್ಟಡದಲ್ಲಿ ಸಂಸ್ಕೃತ ಶಾಲೆಯನ್ನು ಪ್ರಾರಂಭಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | ಅರಕಲಗೂಡು ಪಟ್ಟಣದಲ್ಲಿ ನಿರ್ಮಾಣ ಮಾಡಿರುವ ಸಂಸ್ಕೃತ ಭವನ ಕಟ್ಟಡದಲ್ಲಿ ಸಂಸ್ಕೃತ ಶಾಲೆಯನ್ನು ಪ್ರಾರಂಭಿಸಲು ಕ್ರಮ ವಹಿಸುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 2 | ಅರಕಲಗೂಡು ತಾ: ವಡ್ಡರಹಳ್ಳಿ ಗ್ರಾಮದಲ್ಲಿ ಗ್ರಾಮಕ್ಕೆ ಸೇರಿದ ಹಳೆಯ ಮನೆಯನ್ನು (ಗ್ರಾಮದ ಹತ್ತು ಜನದ ಮನೆ) ಕೆಡವಿ ಅದೇ ಸ್ಥಳದಲ್ಲಿ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರದ ಕಟ್ಟಡವನ್ನು ನಿರ್ಮಿಸುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ವಡ್ಡರಹಳ್ಳಿ ಗ್ರಾಮದಲ್ಲಿ ನಿರ್ಮಿಸಬೇಕಾಗಿರುವ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರವನ್ನು ಬೇರೆ ಗ್ರಾಮದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ. ಆದರೆ, ವಡ್ಡರಹಳ್ಳಿ ಗ್ರಾಮದಲ್ಲಿ ಸಮುದಾಯಭವನ, ಡೈರಿ ಮುಂತಾದ ಕಟ್ಟಡಗಳು ಇರುತ್ತವೆ ಮತ್ತು ಗ್ರಾಮಕ್ಕೆ ಸೇರಿದ ಹಳೆಯ ಮನೆಯಿದ್ದು ( ಗ್ರಾಮದ ಹತ್ತು ಜನದ ಮನೆ) ಸದರಿ ಮನೆಯನ್ನು ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರದ ಕಟ್ಟಡ ನಿರ್ಮಾಣಕ್ಕಾಗಿ ಬಿಟ್ಟುಕೊಡಲು ಗ್ರಾಮಸ್ಥರು ಒಪ್ಪಿರುತ್ತಾರೆ. ಆದ್ದರಿಂದ, ಬೇರೆ ಗ್ರಾಮದಲ್ಲಿ ನಿರ್ಮಿಸಲು ಉದ್ದೇಶಿಸಿರುವ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರದ ಕಟ್ಟಡವನ್ನು ವಡ್ಡರಹಳ್ಳಿ ಗ್ರಾಮಕ್ಕೆ ಸೇರಿದ ಹಳೆಯ ಮನೆಯನ್ನು ಕೆಡವಿ ಅದೇ ಸ್ಥಳದಲ್ಲಿ ನಿರ್ಮಿಸುವುದು ಸೂಕ್ತವೆಂದು ಅಭಿಪ್ರಾಯಿಸಿ ಈ ಬಗ್ಗೆ ಸಭೆಯಲ್ಲಿ ನಿರ್ಣಯ ಮಾಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಅರಕಲಗೂಡು ತಾಲ್ಲೂಕು ವಡ್ಡರಹಳ್ಳಿ ಗ್ರಾಮಕ್ಕೆ ಮಂಜೂರಾಗಿರುವ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರದ ಕಟ್ಟಡವನ್ನು ವಡ್ಡರಹಳ್ಳಿ ಗ್ರಾಮಕ್ಕೆ ಸೇರಿದ ಹಳೆಯ ಮನೆಯನ್ನು ( ಗ್ರಾಮದ ಹತ್ತು ಜನದ ಮನೆ) ಕೆಡವಿ ಅದೇ ಸ್ಥಳದಲ್ಲಿ ನಿರ್ಮಿಸಲು ಕ್ರಮ ವಹಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನು ಮತದಿಂದ ತೀರ್ಮಾನಿಸಲಾಯಿತು. |
| | | ಮಾನ್ಯ ಸದಸ್ಯರಾದ ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಮಾತನಾಡುತ್ತಾ, ಬಾಳ್ಳುಪೇಟೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದಲ್ಲಿ ಹಾವುಗಳು ಇರುತ್ತವೆ ಈ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರ ಗಮನಕ್ಕೆ ಈಗಾಗಲೇ ತರಲಾಗಿದೆ. ಆದ್ದರಿಂದ, ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಬಾಳ್ಳುಪೇಟೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 24X7 ಆಸ್ಪತ್ರೆಯನ್ನಾಗಿ ಮಾಡಲು ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಎಲ್ಲಾ ಕ್ರಮ ವಹಿಸಲಾಗುತ್ತಿದೆ, ಆಸ್ಪತ್ರೆಗೆ ತಂತಿಬೇಲಿ ವ್ಯವಸ್ಥೆಯನ್ನು ಸಹ ಮಾಡಲು ಕ್ರಮ ವಹಿಸಲಾಗುತ್ತಿದೆ ಅಲ್ಲದೆ, ಆಸ್ಪತ್ರೆಗೆ ಅವಶ್ಯವಿರುವ ಸಾಧನ ಸಲಕರಣೆಗಳನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ ಮತ್ತು ವೈದ್ಯಾಧಿಕಾರಿಗಳು ಕೇಂದ್ರಸ್ಥಾನದಲ್ಲಿಯೇ ವಾಸಿಸಲು ನಿರ್ದೇಶನ ನೀಡಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಡಿ.ಎಂ. ಕುರ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸ್ಟಾಪ್ ನರ್ಸ್ ಅನ್ನು ನೇಮಕ ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಅಂಬಿಕಾರಾಮಣ್ಣರವರು ಮಾತನಾಡುತ್ತಾ, ದಿಡಗ ಹೆರಿಗೆ ಆಸ್ಪತ್ರೆ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಿ ಇಲಾಖೆಯ ವಶಕ್ಕೆ ನೀಡಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದ ವಿಷಯಗಳಿಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಅಗತ್ಯ ಕ್ರಮ ವಹಿಸುವಂತೆ ತಿಳಿಸಲಾಯಿತು. |

| | | | |
|---|---|---|---|
| | | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ದಿಡಗ ಹೆರಿಗೆ ಆಸ್ಪತ್ರೆ ಕಟ್ಟಡ ಕಾಮಗಾರಿಯಲ್ಲಿ ವಿದ್ಯುದ್ದೀಕರಣ ಕಾಮಗಾರಿ ಬಾಕಿ ಉಳಿದಿದ್ದು, ವಿದ್ಯುದ್ದೀಕರಣ ಸೌಲಭ್ಯ ಕಲ್ಪಿಸಿದ ಕೂಡಲೇ ಕಟ್ಟಡ ಉದ್ಘಾಟನೆಗೆ ಕ್ರಮ ವಹಿಸಲಾಗುವುದೆಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಎ.ಎನ್.ಎಂ. ವಸತಿ ಗೃಹಗಳಲ್ಲಿ ಎ.ಎನ್.ಎಂ. ರವರು ವಾಸವಿಲ್ಲದ ಪ್ರಯುಕ್ತ ವಸತಿ ಗೃಹದ ಸುತ್ತಲೂ ಗಿಡಗಂಟಿಗಳು ಬೆಳೆದಿರುತ್ತವೆ. ಆದ್ದರಿಂದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಗಿಡಗಂಟಿಗಳನ್ನು ತೆಗೆದು ಸ್ವಚ್ಚಗೊಳಿಸಲು ಕ್ರಮ ವಹಿಸಬೇಕೆಂದು ಕೋರಿದರು. ಮತ್ತು ಎ.ಎನ್.ಎಂ ಗಳಿಗೆ ಒಂದು ಅಥವಾ ಎರಡು ಗ್ರಾಮಗಳಲ್ಲಿ ಕೆಲಸವನ್ನು ನಿರ್ವಹಿಸಲು ಪ್ರಭಾರವನ್ನು ನೀಡಬೇಕು. ಎರಡಕ್ಕಿಂತ ಹೆಚ್ಚಿಗೆ ಗ್ರಾಮಗಳಲ್ಲಿ ಕೆಲಸ ನಿರ್ವಹಿಸುವಂತೆ ತಿಳಿಸಿದಲ್ಲಿ ಅವರು ವಸತಿ ಗೃಹದಲ್ಲಿ ವಾಸವಿರಲು ಸಾಧ್ಯವಾಗುವುದಿಲ್ಲ. ಈ ಬಗ್ಗೆಯೂ ಸಹ ಪರಿಶೀಲಿಸಿ ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಿಂದಿನ ಸಾಮಾನ್ಯ ಸಭೆಯಲ್ಲಿ ಚರ್ಚಿಸಿದಂತೆ, ಎ.ಎನ್.ಎಂ. ಮತ್ತು ವೈದ್ಯಾಧಿಕಾರಿಗಳಿಗೆ ಕೇಂದ್ರಸ್ಥಾನದಲ್ಲಿಯೇ ವಾಸವಿರುವಂತೆ ಈಗಾಗಲೇ ನಿರ್ದೇಶನ ನೀಡಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ. ಇಂದಿರಾಧರ್ಮಪ್ಪರವರು ಮಾತನಾಡುತ್ತಾ, ಬೇಲೂರು ತಾಲ್ಲೂಕು ಆಸ್ಪತ್ರೆಯಲ್ಲಿ ಫಾರ್ಮಸಿಸ್ಟ್ ಇಲ್ಲದೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಬೇಲೂರು ತಾಲ್ಲೂಕು ಆಸ್ಪತ್ರೆಗೆ ಬೇರೆ ಕಡೆಯಿಂದ ಫಾರ್ಮಾಸಿಸ್ಟನ್ನು ನಿಯೋಜನೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು, ಹಾಸನ ತಾಲ್ಲೂಕು ಪಂಚಾಯಿತಿ, ಇವರು ಮಾತನಾಡುತ್ತಾ, ಹಾಸನ ಜಿಲ್ಲೆಗೆ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರಾಗಿದ್ದು, ಸರ್ಕಾರದ ಮಾರ್ಗಸೂಚಿಗಳನ್ವಯ 2 ಎಕರೆ ಜಮೀನು ಮತ್ತು ರೂ.1.00ಲಕ್ಷ ಠೇವಣಿಯನ್ನು ಕಟ್ಟಿದ್ದರೂ ಸಹ ಸ್ವಂತ ಕಟ್ಟಡ ನಿರ್ಮಾಣ ಮಾಡಿರುವುದಿಲ್ಲ. ಆದ್ದರಿಂದ, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಕೃಷ್ಣಾನಾಯ್ಕರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನಲ್ಲಿ ರೋಗಿಗಳು ಶಸ್ತ್ರಚಿಕಿತ್ಸೆಗಾಗಿ ತಾಲ್ಲೂಕು ಆಸ್ಪತ್ರೆಗೆ ಹೋದರೆ ಅಲ್ಲಿನ ವೈದ್ಯರು ಹಾಸನಕ್ಕೆ ಹೋಗಿ ಎಂದು ರೋಗಿಗಳಿಗೆ ಹೇಳಿ ನಂತರ ಅವರು ಜಿಲ್ಲಾ ಆಸ್ಪತ್ರೆಗೆ ಬಂದಿರುತ್ತಾರೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕು ಆಸ್ಪತ್ರೆಯಲ್ಲಿ ಅರಿವಳಿಕೆ ತಜ್ಞರು ದೀರ್ಘಾವಧಿ ರಜೆಯಲ್ಲಿರುತ್ತಾರೆ. ಶಸ್ತ್ರ ಚಿಕಿತ್ಸೆ ಮಾಡಲು ಅರಿವಳಿಕೆ ಚುಚ್ಚುಮದ್ದನ್ನು ಅವಶ್ಯವಾಗಿ ನೀಡಬೇಕಾಗಿರುತ್ತದೆ. ಆದಪ್ರಯುಕ್ತ, ಅಲ್ಲಿನ ವೈದ್ಯರು ರೋಗಿಗಳಿಗೆ ಶಸ್ತ್ರಚಿಕಿತ್ಸೆಗಾಗಿ ಹಾಸನಕ್ಕೆ ಕಳುಹಿಸಿ ಅವರೇ ಸ್ವತ: ಹಾಸನಕ್ಕೆ ಬಂದು ಶಸ್ತ್ರ ಚಿಕಿತ್ಸೆಯನ್ನು ಮಾಡುತ್ತಿದ್ದಾರೆಂದು ಸಭೆಗೆ ವಿವರ ನೀಡಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಬಾಳ್ಳುಪೇಟೆ ಗ್ರಾಮ ಪಂಚಾಯಿತಿಯಲ್ಲಿ ಔಷಧಿ ಕಿಟ್ ಅನ್ನು ನಿಗದಿಪಡಿಸಿದ ಮೊತ್ತಕ್ಕಿಂತ ಹೆಚ್ಚಿನ ಮೊತ್ತವನ್ನು ನೀಡಿ ಖರೀದಿ ಮಾಡಿರುತ್ತಾರೆ. ಈ ಬಗ್ಗೆ ಪರಿಶೀಲಿಸಿದ ನಂತರವೇ ಬಿಲ್ಲನ್ನು ಪಾವತಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಈ ಬಗ್ಗೆ 3 ದಿನಗಳ ಒಳಗಾಗಿ ವರದಿಯನ್ನು ಪಡೆದು ಪರಿಶೀಲಿಸಲಾಗುವುದು ಎಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಅರೇಹಳ್ಳಿ ಕ್ಷೇತ್ರದಲ್ಲಿ ಕೊಳವೆ ಬಾವಿಗಳು ವಿಫಲವಾಗುತ್ತಿದ್ದು, ಕುಡಿಯುವ ನೀರಿನ ಸಮಸ್ಯೆಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅರೇಹಳ್ಳಿ ವ್ಯಾಪ್ತಿಯಲ್ಲಿ ತೆರೆದ ಬಾವಿ ತೆಗೆಯಲು ಸಾಧ್ಯವಿದ್ದಲ್ಲಿ ತೆರೆದ ಬಾವಿಗಳನ್ನು ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು. | |
| 3 | ಸಮಾಜ ಕಲ್ಯಾಣ ಇಲಾಖಾವತಿಯಿಂದ ನಡೆಯುತ್ತಿರುವ ಅತಿ ಹೆಚ್ಚು ಬೇಡಿಕೆ ಇರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ 2011-12ನೇ ಸಾಲಿಗೆ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ಹೆಚ್ಚಿಸಲು ಹಾಗೂ 2 ಹೊಸ ಹಾಸ್ಟೆಲ್ ಗಳನ್ನು ಮಂಜೂರು ಮಾಡಲು ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಜಿಸಕಅ/ಡಿ5/ಮೆ.ನಂ.ವಿ.ನಿ/ಪ್ರ/ಸಿ.ಆರ್/01/2011-12 ದಿನಾಂಕ: 26-08-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಜಿಲ್ಲೆಯಲ್ಲಿ ಇಲಾಖಾವತಿಯಿಂದ 64 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿ ಸಂಖ್ಯೆ: 4133 ಇರುತ್ತದೆ. ಈ ಪೈಕಿ ಈ ಸಾಲಿಗೆ 3034 ವಿದ್ಯಾರ್ಥಿಗಳು ಮಾತ್ರ ದಾಖಲಾಗಿದ್ದು, ಇನ್ನೂ 1099 ಸ್ಥಾನಗಳು ಖಾಲಿಯಿರುತ್ತವೆ. ಖಾಲಿ ಇರುವ ಸ್ಥಾನಗಳಿಗೆ ಈ ಸಾಲಿನ ಅನುದಾನದಲ್ಲಿ ಒಟ್ಟು ರೂ.90.50 ಲಕ್ಷಗಳು ಉಳಿತಾಯವಾಗುತ್ತದೆ.<br>ಈ ಉಳಿತಾಯದ ಹಣದಲ್ಲಿ ಹಾಸನ ಜಿಲ್ಲಾ ಕೇಂದ್ರದಲ್ಲಿ ಕಾಲೇಜು ವಿದ್ಯಾರ್ಥಿನಿಲಯಗಳಿಗೆ ಪ್ರವೇಶಕ್ಕಾಗಿ ಹೆಚ್ಚು ಅರ್ಜಿಗಳು ಬಂದಿರುವುದರಿಂದ, ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಸಲುವಾಗಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯಕ್ಕೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಪ್ರಸ್ತಾವನೆಯನ್ನು ಮಂಡಿಸಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಕೋರಿರುವಂತೆ, ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ನಡೆಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಭರ್ತಿಯಾಗದೆ ಖಾಲಿ ಉಳಿಯುವ ಸ್ಥಾನಗಳಿಗೆ ಉಳಿತಾಯವಾಗುವ ರೂ.90.50 ಲಕ್ಷಗಳಲ್ಲಿ ಹಾಸನ ಜಿಲ್ಲಾ ಕೇಂದ್ರದಲ್ಲಿ ಹೊಸ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡು ವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| 4 | ಬೇಲೂರು ತಾಲ್ಲೂಕು ಅರೇಹಳ್ಳಿ ಗ್ರಾಮದಲ್ಲಿ ನಡೆಸಲು ಉದ್ದೇಶಿಸಿರುವ ಪುರುಷ ಹಾಗೂ ಮಹಿಳೆಯರ ಗ್ರಾಮೀಣ | ಸುಭಾಷ್ ಯುವಕರ ಸಂಘ (ರಿ), ಅರೇಹಳ್ಳಿ, ಬೇಲೂರು ತಾಲ್ಲೂಕು ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 13-08-2011 ಹಾಗೂ 14-08-2011ರಂದು ಅರೇಹಳ್ಳಿ ಗ್ರಾಮದಲ್ಲಿ ಪುರುಷ ಹಾಗೂ ಮಹಿಳೆಯರ ಗ್ರಾಮೀನ ಕ್ರೀಡಾ ಕೂಟಗಳನ್ನು ಏರ್ಪಡಿಸಲಾಗಿದ್ದು, ಸದರಿ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ಸಹಾಯಧನವನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ಸುಭಾಷ್ ಯುವಕರ ಸಂಘ (ರಿ), ಅರೇಹಳ್ಳಿ, ಬೇಲೂರು ತಾಲ್ಲೂಕು ಇವರು |

| | | | |
|---|---|---|---|
| | ಕ್ರೀಡಾ ಕೂಟಗಳನ್ನು ಏರ್ಪಡಿಸಲು ಪ್ರೋತ್ಸಾಹ ಧನ ಕೋರಿ | | ಕೋರಿರುವಂತೆ, ದಿನಾಂಕ: 13-08-2011 ಮತ್ತು 14-08-2011ರಂದು ಏರ್ಪಡಿಸಿರುವ ಗ್ರಾಮೀಣ ಕ್ರೀಡಾ ಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- (ರೂಪಾಯಿ ಹತ್ತು ಸಾವಿರ ಮಾತ್ರ )ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 5 | ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ನಡೆಯುವ ತಾಲ್ಲೂಕು ಮಟ್ಟದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಧನ ಸಹಾಯ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಅಗತ್ಯ ಸಹಾಯಧನವನ್ನು ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಚನ್ನರಾಯ ಪಟ್ಟಣ ತಾಲ್ಲೂಕಿನಲ್ಲಿ ನಡೆಯಲಿರುವ ತಾಲ್ಲೂಕು ಮಟ್ಟದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- (ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು. |
| 6 | ಬೇಲೂರಿನಲ್ಲಿ ನಡೆದ ವಿಭಾಗೀಯ ಮಟ್ಟದ ಥ್ರೋಬಾಲ್ ಪಂದ್ಯಾವಳಿಗೆ ಸಹಾಯಧನ ನೀಡುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಹಾಸನ ಇವರು ತಮ್ಮ ಟಿಪ್ಪಣಿ ದಿನಾಂಕ: 24-08-2011ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಬೇಲೂರು ಇವರ ಆಶ್ರಯದಲ್ಲಿ ದಿನಾಂಕ: 03-09-2011ರಿಂದ 4-09-2011ರವರೆಗೆ ನಡೆಯುವ ಮೈಸೂರು ವಿಭಾಗೀಯ ಮಟ್ಟದ 14/17 ವಯೋಮಿತಿಯ ಶಾಲಾ ಬಾಲಕ/ ಬಾಲಕಿಯರ ಥ್ರೋಬಾಲ್ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.10000/ಗಳ ಧನ ಸಹಾಯವನ್ನು ನೀಡುವಂತೆ ತಿಳಿಸಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಬೇಲೂರು ಇವರ ಆಶ್ರಯದಲ್ಲಿ ದಿನಾಂಕ: 03-09-2011ರಿಂದ 4-09-2011ರವರೆಗೆ ನಡೆಯುವ ಮೈಸೂರು ವಿಭಾಗೀಯ ಮಟ್ಟದ 14/17 ವಯೋಮಿತಿಯ ಶಾಲಾ ಬಾಲಕ/ ಬಾಲಕಿಯರ ಥ್ರೋಬಾಲ್ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.10000/- |

| | | | |
|---|---|---|---|
| | | | ರದ(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನ ಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು |
| 7 | ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಮಾಲೇಕಲ್ಲು ತಿರುಪತಿ ದೇವಸ್ಥಾನದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ. | ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 154/1: ಆರ್.ಆರ್.ಸಿ :2011 ಬೆಂಗಳೂರು ದಿ:08-08-2011ರಲ್ಲಿ ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಮಾಲೇಕಲ್ಲು ತಿರುಪತಿ ದೇವಸ್ಥಾನದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.80.00ಲಕ್ಷಗಳಲ್ಲಿ 2011-12ನೇ ಸಾಲಿನ ಗ್ರಾಮೀಣ ಸಂಪರ್ಕ ಯೋಜನೆ ಲೆಕ್ಕಶೀರ್ಷಿಕೆ 5054-04-337-7-01-132( ಯೋಜನೆ) ರಡಿ ಹಾಸನ ಜಿಲ್ಲಾ ಪಂಚಾಯಿತಿಗೆ ಅನುದಾನ ಹಂಚಿಕೆ ಮಾಡಿ ಕಾಮಗಾರಿಯನ್ನು ಅನುಷ್ಠಾನ ಮಾಡುವಂತೆ ತಿಳಿಸಿದ್ದು, ಸದರಿ ರಸ್ತೆ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಸಾಮಾನ್ಯ ಸಭೆಯ ನಿರ್ಣಯಕ್ಕೆ ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.<br>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 154/1: ಆರ್.ಆರ್.ಸಿ :2011 ಬೆಂಗಳೂರು ದಿ:08-08-2011ರಲ್ಲಿ ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಮಾಲೇಕಲ್ಲು ತಿರುಪತಿ ದೇವಸ್ಥಾನದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.80.00ಲಕ್ಷ (ರೂಪಾಯಿ ಎಂಬತ್ತು ಲಕ್ಷ ಮಾತ್ರ) ಗಳಲ್ಲಿ 2011-12ನೇ ಸಾಲಿನ ಗ್ರಾಮೀಣ ಸಂಪರ್ಕ ಯೋಜನೆ ಲೆಕ್ಕಶೀರ್ಷಿಕೆ 5054-04-337-7-01-132( ಯೋಜನೆ) ರಡಿ ಕಾಮಗಾರಿಗೆ ಸಭೆಯಲ್ಲಿ ಸರ್ವಾನುಮತದಿಂದ ಆಡಳಿತಾತ್ಮಕ ಮಂಜೂರಾತಿ ನೀಡಲಾಯಿತು. |
| | ಸಭೆಯಲ್ಲಿ ಇನ್ನಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

Chandregowda

(ಬಿ.ಡಿ.ಚಂದ್ರೇಗೌಡ)

ಅಧ್ಯಕ್ಷರು,

ಜಿಲ್ಲಾ ಪಂಚಾಯಿತಿ, ಹಾಸನ